**Akashvani : Bangalore**
**Regional Bulletin In Kannada**
**30.11.2025 / 2.30 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**30.11.2025 / 2.30 pm**

**<><*<><>*><>**

ಮುಖ್ಯಾಂಶಗಳು

೧. ಜೇನು ಉತ್ಪಾದನೆಯಲ್ಲಿ ಉತ್ಕೃಷ್ಟತೆ: ಪುತ್ತೂರಿನ 'ಗ್ರಾಮಜನ್ಯ', ತುಮಕೂರಿನ 'ಶಿವಗಂಗಾ ಕಾಲಂಜಿಯಾ' ಕುರಿತು ಮನ್ ಕೀ ಬಾತ್‌ನಲ್ಲಿ ಪ್ರಧಾನಿ ಮೆಚ್ಚುಗೆ

೨. ಇಂದಿನಿಂದ ಜನವರಿ ೪ ರವರೆಗೆ ಪ್ರತಿ ಭಾನುವಾರ ಮೈಸೂರಿನ ರಂಗಾಯಣದಲ್ಲಿ ಬಹುರೂಪಿ ನಾಟಕ ಪ್ರದರ್ಶನ

೩. ಕನ್ನಡ ಚಿತ್ರರಂಗದ ಹಾಸ್ಯ ನಟ ಎಂ.ಎಸ್.ಉಮೇಶ್ ಇನ್ನಿಲ್ಲ

೪. ಖೇಲೋ ಇಂಡಿಯಾ ವಿಶ್ವವಿದ್ಯಾಲಯ ಕ್ರೀಡಾಕೂಟ: ಈಜು ಸ್ಪರ್ಧೆಗಳಲ್ಲಿ ಬೆಂಗಳೂರಿನ ನೈಶಾ ಶೆಟ್ಟಿಗೆ ನಾಲ್ಕು ಬೆಳ್ಳಿ

*************

ಕೃಷಿ ವಲಯದಲ್ಲಿ ಭಾರತ, ಮಹತ್ವದ ಸಾಧನೆ ಮೆರೆದಿದೆ. ದೇಶವು, ೩೫೭ ದಶಲಕ್ಷ ಟನ್ ಆಹಾರ ಧಾನ್ಯ ಉತ್ಪಾದನೆಯೊಂದಿಗೆ ಐತಿಹಾಸಿಕ ದಾಖಲೆಯನ್ನು ಸೃಷ್ಟಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹರ್ಷ ವ್ಯಕ್ತಪಡಿಸಿದ್ದಾರೆ.'ಮನ್ ಕಿ ಬಾತ್' ನ ೧೨೮ನೇ ಆವೃತ್ತಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ, ದೇಶ-ವಿದೇಶಗಳಲ್ಲಿ ನೆಲೆಸಿರುವ ಭಾರತೀಯರನ್ನುದ್ದೇಶಿ ಮಾತನಾಡಿದರು. ಕರ್ನಾಟಕದ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನಲ್ಲಿನ ಸಸ್ಯವರ್ಗವು ಜೇನು ಉತ್ಪಾದನೆಗೆ ಉತ್ಕೃಷ್ಟ ಎಂದು ಪರಿಗಣಿಸಲಾಗುತ್ತದೆ. ಇಲ್ಲಿ, 'ಗ್ರಾಮಜನ್ಯ' ಎಂಬ ರೈತ ಸಂಘಟನೆಯು, ಈ

ನೈಸರ್ಗಿಕ ಉಡುಗೊರೆಗೆ ಹೊಸ ಆಯಾಮವನ್ನು ನೀಡುತ್ತಿದೆ. 'ಗ್ರಾಮಜನ್ಯ' ಆಧುನಿಕ ಸಂಸ್ಕರಣಾ ಘಟಕವನ್ನು ನಿರ್ಮಿಸಿದೆ ಮತ್ತು ಪ್ರಯೋಗಾಲಯ, ಬಾಟಲ್, ಸಂಗ್ರಹಣೆ ಮತ್ತು ಡಿಜಿಟಲ್ ಟ್ರ್ಯಾಕಿಂಗ್‌ನಂತಹ ಸೌಲಭ್ಯಗಳನ್ನು ಒದಗಿಸುತ್ತಿದೆ. ಈಗ, ಈ ಜೇನುತುಪ್ಪ ಬ್ರಾಂಡೆಡ್ ಉತ್ಪನ್ನವಾಗಿ ಹಳ್ಳಿಗಳಿಂದ ನಗರಗಳವರೆಗೆ ತಲುಪುತ್ತಿದೆ. ಎರಡೂವರೆ ಸಾವಿರಕ್ಕೂ ಹೆಚ್ಚು ರೈತರು ಈ ಪ್ರಯತ್ನದಿಂದ ಪ್ರಯೋಜನ ಪಡೆದಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಧ್ವನಿ: ಪ್ರಧಾನಿ ನರೇಂದ್ರಮೋದಿ

ರಾಜ್ಯದ ತುಮಕೂರು ಜಿಲ್ಲೆಯ "ಶಿವಗಂಗಾ ಕಾಲಂಜಿಯಾ" ಎಂಬ ಸಂಸ್ಥೆಯ ಪ್ರಯತ್ನಗಳು ಸಹ ಶ್ಲಾಘನೀಯ. ಪ್ರತಿಯೊಬ್ಬ ಸದಸ್ಯರಿಗೂ ಆರಂಭದಲ್ಲಿ ಎರಡು ಜೇನು ಪೆಟ್ಟಿಗೆಗಳನ್ನು ಇಲ್ಲಿ ನೀಡಲಾಗುತ್ತದೆ. ಹೀಗೆ, ಸಂಸ್ಥೆಯು, ಅನೇಕ ರೈತರನ್ನು ತನ್ನ ಅಭಿಯಾನದಲ್ಲಿ ಸೇರ್ಪಡೆಗೊಳಿಸಿಕೊಂಡಿದೆ. ಈಗ, ಈ ಸಂಸ್ಥೆಯೊಂದಿಗೆ ಕೈಜೋಡಿಸಿದ ರೈತರು ಜಂಟಿಯಾಗಿ ಜೇನುತುಪ್ಪವನ್ನು ಹೊರತೆಗೆದು, ಅದನ್ನು ಸುಂದರವಾಗಿ ಪ್ಯಾಕ್ ಮಾಡಿ, ಸ್ಥಳೀಯ ಮಾರುಕಟ್ಟೆಗೆ ತಲುಪಿಸುತ್ತಾರೆ. ಇದರಿಂದ ಅವರಿಗೆ ಲಕ್ಷಾಂತರ ರೂಪಾಯಿಗಳ ಗಳಿಕೆಯಾಗುತ್ತಿದೆ ಎಂದು ತಿಳಿಸಿದರು. ಇಂದು ಭಾರತ ಜೇನುತುಪ್ಪ ಉತ್ಪಾದನೆಯಲ್ಲಿ ಹೊಸ ದಾಖಲೆಗಳನ್ನು ಸೃಷ್ಟಿಸುತ್ತಿದೆ. ೧೧ ವರ್ಷಗಳ ಹಿಂದೆ, ದೇಶದ ಜೇನುತುಪ್ಪ ಉತ್ಪಾದನೆ ೭೬ ಸಾವಿರ ಮೆಟ್ರಿಕ್ ಟನ್‌ಗಳಷ್ಟಿತ್ತು. ಈಗ ಅದು ೧.೫ ಲಕ್ಷ ಮೆಟ್ರಿಕ್ ಟನ್‌ಗಳಿಗಿಂತ ಹೆಚ್ಚಾಗಿದೆ. ಕಳೆದ ಕೆಲವು ವರ್ಷಗಳಲ್ಲಿ ಜೇನುತುಪ್ಪದ ರಫ್ತು ಕೂಡ ಮೂರು ಪಟ್ಟು ಹೆಚ್ಚಾಗಿದೆ ಎಂದರು. ಹನಿ ಮಿಷನ್ ಕಾರ್ಯಕ್ರಮದಡಿಯಲ್ಲಿ, ಖಾದಿ ಗ್ರಾಮೋದ್ಯೋಗಗಳು ಜನರಿಗೆ ೨.೨೫ ಲಕ್ಷಕ್ಕೂ ಹೆಚ್ಚು ಜೇನು ಪೆಟ್ಟಿಗೆಗಳ ವಿತರಣೆ ಮಾಡಿವೆ. ಇದರಿಂದ ಸಾವಿರಾರು

ಜನರಿಗೆ ಹೊಸ ಉದ್ಯೋಗಾವಕಾಶಗಳು ದೊರೆತಿದೆ. ಇದರರ್ಥ ದೇಶದ ಮೂಲೆ ಮೂಲೆಗಳಲ್ಲಿ ಜೇನಿನ ಸಿಹಿ ವೃದ್ಧಿಸುತ್ತಿದೆ. ಈ ಸಿಹಿ ರೈತರ ಆದಾಯವನ್ನೂ ಹೆಚ್ಚಿಸುತ್ತಿದೆ ಎಂದು ಪ್ರಧಾನಿ ಹೇಳಿದರು. ಈ ತಿಂಗಳ ಆರಂಭದಲ್ಲಿ, ಸೌದಿ ಅರೇಬಿಯಾದಲ್ಲಿ ಮೊದಲ ಬಾರಿಗೆ ಸಾರ್ವಜನಿಕ ವೇದಿಕೆಯಲ್ಲಿ ಭಗವದ್ಗೀತೆಯ ಪ್ರಸ್ತುತಿಯನ್ನು ನೀಡಲಾಯಿತು. ಯುರೋಪಿನ ಲಾತ್ವಿಯಾದಲ್ಲಿಯೂ ಸ್ಮರಣೀಯ ಗೀತಾ ಮಹೋತ್ಸವವನ್ನು ಆಯೋಜಿಸಲಾಗಿತ್ತು. ಲಾತ್ವಿಯಾ, ಎಸ್ಟೋನಿಯಾ, ಲಿಥುವೇನಿಯಾ ಮತ್ತು ಅಲ್ಜೀರಿಯಾದ ಕಲಾವಿದರು ಈ ಉತ್ಸವದಲ್ಲಿ ಬಹಳ ಉತ್ಸಾಹದಿಂದ ಭಾಗವಹಿಸಿದ್ದರು ಎಂದರು. ಈ ತಿಂಗಳು, ಭಾರತೀಯ ಮಹಿಳಾ ತಂಡವು ಐಸಿಸಿ ಮಹಿಳಾ ವಿಶ್ವಕಪ್ ಗೆಲ್ಲುವುದರೊಂದಿಗೆ ಆರಂಭವಾಯಿತು. ಕೆಲವು ದಿನಗಳ ಹಿಂದೆ, ಟೋಕಿಯೊದಲ್ಲಿ ಡೆಫ್-ಒಲಿಂಪಿಕ್ಸ್ ನಡೆದಿತ್ತು. ಅಲ್ಲಿ ಭಾರತ ಇಲ್ಲಿಯವರೆಗಿನ ಅತ್ಯುತ್ತಮ ಪ್ರದರ್ಶನವನ್ನು ನೀಡಿ, ೨೦ ಪದಕಗಳನ್ನು ಗೆದ್ದುಕೊಂಡಿತು ಎಂದು ಪ್ರಧಾನಿ ಹೇಳಿದರು.

*************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಜನಪ್ರಿಯ ಮಾಸಿಕ ರೇಡಿಯೋ ಕಾರ್ಯಕ್ರಮ 'ಮನ್ ಕೀ ಬಾತ್'ನ ೧೨೮ನೇ ಆವೃತ್ತಿಯನ್ನು ಹುಬ್ಬಳ್ಳಿಯಲ್ಲಿ ವೀಕ್ಷಿಸಲಾಯಿತು. ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರ ನೇತೃತ್ವದಲ್ಲಿ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ವಾರ್ಡ್ ನಂಬರ್ ೫೨ರ ಬೆಂಗೇರಿ ಹನುಮಂತ ದೇವಸ್ಥಾನದಲ್ಲಿ ಈ ಕಾರ್ಯಕ್ರಮವನ್ನು ವೀಕ್ಷಿಸಲಾಯಿತು. ನಂತರ ಮಾತನಾಡಿದ ಸಚಿವ ಪ್ರಹ್ಲಾದ್ ಜೋಶಿ, 'ಮನ್ ಕೀ ಬಾತ್' ಕಾರ್ಯಕ್ರಮವು ಹಲವು ಸಾಂಪ್ರದಾಯಿಕ ಮತ್ತು ಡಿಜಿಟಲ್ ವೇದಿಕೆಗಳ ಮೂಲಕ ಕೋಟ್ಯಂತರ ಪ್ರೇಕ್ಷಕರನ್ನು ತಲುಪುತ್ತಿದೆ. 'ವೋಕಲ್ ಫಾರ್ ಲೋಕಲ್' ಹಾಗೂ ಸ್ವದೇಶಿ ಉತ್ಪನ್ನಗಳ ಸಾಧಕರ

ಯಶೋಗಾಥೆಗಳನ್ನು ಅನಾವರಣಗೊಳಿಸುವ ಈ ಕಾರ್ಯಕ್ರಮ ಪ್ರಧಾನಮಂತ್ರಿ ಅವರ ಮಾತು ಎಲ್ಲರೂ ಸ್ಫೂರ್ತಿಯಾಗಿದೆ ಎಂದು ಹೇಳಿದರು.

ಧ್ವನಿ: ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ

*************

ನಿರೀಕ್ಷಿತ ಬಹುರೂಪಿ ರಾಷ್ಟ್ರೀಯ ನಾಟಕೋತ್ಸವಕ್ಕೆ ಮೈಸೂರು ರಂಗಾಯಣ ಸಜ್ಜಾಗುತ್ತಿದ್ದು, ಬಹುರೂಪಿಗೆ ಮುನ್ನುಡಿಯಾಗಿ ನಾಟಕೋತ್ಸವವನ್ನು ಆಯೋಜಿಸಿದೆ. ಮೈಸೂರಿನ ರಂಗಾಯಣ ಆವರಣದಲ್ಲಿನ ಬಿ.ವಿ.ಕಾರಂತ ರಂಗ ಚಾವಡಿಯಲ್ಲಿ ಇಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ರಂಗಾಯಣದ ಪ್ರಮುಖ ನಾಟಕೋತ್ಸವವಾದ ಬಹುರೂಪಿಗೆ ೨೫ ವರ್ಷ ತುಂಬುತ್ತಿರುವ ಹಿನ್ನೆಲೆಯಲ್ಲಿ ಈ ಬಾರಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಬಹುರೂಪಿಗೆ ಮುನ್ನುಡಿಯಾಗಿ ಇಂದಿನಿಂದ ಜನವರಿ ೪ ರವರೆಗೆ ಪ್ರತಿ ಭಾನುವಾರ ನಾಡಿನ ವಿವಿಧ ರಾಂಗಾಯಣಗಳ ತಂಡದಿಂದ ನಾಟಕ ಪ್ರದರ್ಶನ ಏರ್ಪಡಿಸಲಾಗಿದೆ ಎಂದು ತಿಳಿಸಿದರು. ಈ ನಾಟಕ ಉತ್ಸವದಲ್ಲಿ ಯಕ್ಷ ರಂಗಾಯಣ ಕಾರ್ಕಳ, ಶಿವಮೊಗ್ಗ ರಂಗಾಯಣ, ಧಾರವಾಡ ರಂಗಾಯಣ, ವೃತ್ತಿ ರಂಗಾಯಣ ದಾವಣಗೆರೆ, ಕಲಬುರಗಿ ರಂಗಾಯಣ ಹಾಗೂ ಮೈಸೂರು ರಂಗಾಯಣಗಳಿಂದ ವಾರಾಂತ್ಯದಲ್ಲಿ ನಾಟಕಗಳು ರಂಗಾಯಣದ ಭೂಮಿಗೀತ ರಂಗಮಂದಿರದಲ್ಲಿ ಪ್ರದರ್ಶನ ಕಾಣಲಿವೆ ಎಂದು ಅವರು ಮಾಹಿತಿ ನೀಡಿದರು.

*************

ಕ್ಯಾನ್ಸರ್ ಸಮಸ್ಯೆಯಿಂದ ಬಳಲುತ್ತಿದ್ದ ಕನ್ನಡದ ಹಿರಿಯ ನಟ ಎಂ.ಎಸ್. ಉಮೇಶ್ ಬೆಂಗಳೂರಿನ ಕಿದ್ವಾಯಿ ಆಸ್ಪತ್ರೆಯಲ್ಲಿ ಇಂದು ಬೆಳಗ್ಗೆ ಕೊನೆಯುಸಿರೆಳೆದಿದ್ದಾರೆ.ಕೆಲ

ದಿನಗಳ ಹಿಂದೆಯಷ್ಟೇ ಮನೆಯಲ್ಲಿ ಜಾರಿಬಿದ್ದಿದ್ದ ಉಮೇಶ್, ಕಾಲು ಮತ್ತು ಸೊಂಟಕ್ಕೆ ಪೆಟ್ಟು ಮಾಡಿಕೊಂಡಿದ್ದರು. ತಕ್ಷಣವೇ ಅವರನ್ನು ಆಸ್ಪತ್ರೆ ದಾಖಲಿಸಲಾಗಿತ್ತು. ಚಿಕಿತ್ಸೆ ಪಡೆಯುವಾಗ ಅವರಿಗೆ ಕ್ಯಾನ್ಸರ್ ಪತ್ತೆಯಾಗಿತ್ತು. ಕಾಲಿಗೆ ಸರ್ಜರಿ ಮಾಡುವಾಗ ಅವರಿಗೆ ಲಿವರ್ ಕ್ಯಾನ್ಸರ್ ಇರುವ ಬಗ್ಗೆಯೂ ವೈದ್ಯರು ಈ ಹಿಂದೆ ಮಾಹಿತಿ ನೀಡಿದರು. ಹೀಗಾಗಿ ಆಸ್ಪತ್ರೆಯಲ್ಲೇ ಚಿಕಿತ್ಸೆ ಪಡೆಯುತ್ತಿದ್ದ ಉಮೇಶ್ ಅವರಿಂದು ಇಹಲೋಕ ತ್ಯಜಿಸಿದ್ದಾರೆ. ೩೫೦ಕ್ಕೂ ಹೆಚ್ಚು ಸಿನಿಮಾಗಳಲ್ಲಿ ಉಮೇಶ್ ಅವರು ಅಭಿನಯಿಸಿದ್ದಾರೆ. ೧೯೪೫ರ ಏಪ್ರಿಲ್ ೨೪ರಂದು ಮೈಸೂರಿನಲ್ಲಿ ಜನಿಸಿದ ಅವರು, ೧೯೬೦ರಲ್ಲಿ ಬಿ.ಆರ್. ಪಂಥುಲು ನಿರ್ದೇಶನದ ‘ಮಕ್ಕಳ ರಾಜ್ಯ’ ಸಿನಿಮಾದ ಮೂಲಕ ಚಿತ್ರರಂಗಕ್ಕೆ ಪ್ರವೇಶಿಸಿದರು. ಬಳಿಕ ಹಲವಾರು ಸಿನಿಮಾಗಳಲ್ಲಿ ನಟಿಸುವ ಅವಕಾಶ ಪಡೆದುಕೊಂಡರು. ‘ನಾಗರ ಹೊಳೆ”, ‘ಗುರು ಶಿಷ್ಯರು’, ‘ಅನುಪಮಾ’, ‘ಕಾಮನ ಬಿಲ್ಲು’, ‘ಅಪೂರ್ವ ಸಂಗಮ’, ‘ಶ್ರುತಿ ಸೇರಿದಾಗ’, ‘ಹಾಲು ಸಕ್ಕರೆ’, ‘ಗೋಲ್‌ಮಾಲ್ ರಾಧಾಕೃಷ್ಣ’, ‘ಮಲಯ ಮಾರುತ’, ‘ಗಜಪತಿ ಗರ್ಭಭಂಗ’ ಸೇರಿದಂತೆ ಅನೇಕ ಸಿನಿಮಾಗಳಲ್ಲಿ ಉಮೇಶ್ ನಟಿಸಿದ್ದರು. ಉಮೇಶ್ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸೇರಿದಂತೆ ಕನ್ನಡ ಚಿತ್ರರಂಗದ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.ಮುಖ್ಯಮಂತ್ರಿ ಸಿದ್ಧರಾಮಯ್ಯ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದರು.

*************

ಹಾವೇರಿ ಜಿಲ್ಲೆ ಹಾನಗಲ್ ತಾಲೂಕಿನ ೧೧ ಸರ್ಕಾರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ತರಗತಿ- ಎಲ್.ಕೆ.ಜಿ ಮತ್ತು ಯು.ಕೆ.ಜಿ ಆರಂಭಿಸಲು ಅನುಮತಿ ಲಭಿಸಿದೆ ಎಂದು ಶಾಸಕ ಶ್ರೀನಿವಾಸ ಮಾನೆ ತಿಳಿಸಿದ್ದಾರೆ. ಕನ್ನಡ ಮತ್ತು ಉರ್ದು ಮಾಧ್ಯಮದ ಒಟ್ಟು ೯ ಶಾಲೆಗಳು ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಮೇಲ್ದರ್ಜೆಗೇರಿವೆ. ಶಿಕ್ಷಣ

ಕ್ಷೇತ್ರದಲ್ಲಿ ಸಾಕಷ್ಟು ಸುಧಾರಣೆ ತರುವ ಮೂಲಕ ಎಸ್ಸೆಸ್ಸೆಲ್ಸಿ ಪರೀಕ್ಷೆ ಫಲಿತಾಂಶ ಹೆಚ್ಚಳಕ್ಕೂ ಕಾಳಜಿ ವಹಿಸಲಾಗಿದೆ ಎಂದು ಶಾಸಕ ಶಾಸಕ ಶ್ರೀನಿವಾಸ ಮಾನೆ ತಿಳಿಸಿದರು.

*************

ರಾಜಸ್ತಾನದಲ್ಲಿ ನಡೆಯುತ್ತಿರುವ ಖೇಲೋ ಇಂಡಿಯಾ ವಿಶ್ವವಿದ್ಯಾಲಯ ಕ್ರೀಡಾಕೂಟದ ಈಜು ಸ್ಪರ್ಧೆಗಳಲ್ಲಿ ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ವ್ಯಾಪ್ತಿಯ ಸೇಂಟ್ ಜೋಸೆಫ್ ಕಾಮರ್ಸ್ ಕಾಲೇಜಿನ ವಿದ್ಯಾರ್ಥಿನಿ ನೈಶಾ ಶೆಟ್ಟಿ ನಾಲ್ಕು ರಜತ ಪದಗಳನ್ನು ಬಾಚಿಕೊಂಡಿದ್ದಾರೆ. ಮಹಿಳೆಯರ ೧೦೦ ಮೀಟರ್ ಬಟರ್ ಫ್ಲೈ, ೫೦ ಮೀಟರ್ ಬಟರ್ ಫ್ಲೈ, ೧೦೦ ಮೀಟರ್ ಫ್ರೀಸ್ಟೈಲ್ ಮತ್ತು ೧೦೦ ಮೀಟರ್ ಬ್ಯಾಕ್ ಸ್ಟ್ರೋಕ್ ಈಜು ಸ್ಪರ್ಧೆಗಳಲ್ಲಿ ಗೆದ್ದು, ನೈಶಾ ಶೆಟ್ಟಿ ಒಟ್ಟು ನಾಲ್ಕು ಬೆಳ್ಳಿ ಪದಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ಇದೇ ವೇಳೆ, ಫೆನ್ಸಿಂಗ್ ಫಾಯಿಲ್ ಮಹಿಳಾ ತಂಡ ಕಂಚಿನ ಪದಕ ಗಳಿಸಿದೆ. ಇನ್ನೊಂದೆಡೆ, ಬಿಸಿಯು ಹಾಕಿ ತಂಡ, ಸೆಮಿಫೈನಲ್ ಹಂತವನ್ನು ತಲುಪಿದೆ. ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ರಮೇಶ್.ಬಿ., ಕುಲಸಚಿವರಾದ ಎ. ನವೀನ್ ಜೋಸೆಫ್ ಹಾಗೂ ಬಿಸಿಯು ಪ್ರಭಾರ ಕ್ರೀಡಾ ನಿರ್ದೇಶಕ ಪ್ರೊ. ಕೆ. ಶಿವಶಂಕರ್ ವಿಜೇತ ಸ್ಪರ್ಧಿಗಳನ್ನು ಅಭಿನಂದಿಸಿದ್ದಾರೆ.

*************